# MARCH 23 2024
# ALL INDIA RADIO- DHARWAD
# PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಜೆಡಿಎಸ್, ಬಿಜೆಪಿಯ ಹಲವು ಮುಖಂಡರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ.
- ಲೋಕಸಭಾ ಚುನಾವಣೆ; ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಅಧಿಕಾರಿಗಳಿಂದ ಕಟ್ಟುನಿಟ್ಟಿನ ಕ್ರಮ.
- ರಾಜ್ಯದ ವಿವಿಧೆಡೆ ಮತದಾನದ ಕುರಿತು ಜಾಗೃತಿ ಮೂಡಿಸಲು ಸ್ವೀಪ ಸಮಿತಿಯಿಂದ ವಿನೂತನ ಕಾರ್ಯಕ್ರಮ.
- ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಭೀಮಾ, ಕೃಷ್ಣಾ ನದಿಗೆ ನೀರು ಹರಿಸುವಂತೆ ಮಹಾರಾಷ್ಟ್ರ ಮುಖ್ಯಮಂತ್ರಿಯವರಿಗೆ ಮನವಿ – ಸಚಿವ ಪ್ರಿಯಾಂಕ್ ಖರ್ಗೆ.

ಈಗ ವಾರ್ತೆಗಳ ವಿವರ

ವಿಧಾನ ಪರಿಷತ್ ಸದಸ್ಯ ಮಾಜಿ ಮರಿತಿಬ್ಬೇಗೌಡ ಸೇರಿದಂತೆ ಜೆಡಿಎಸ್ ಹಾಗೂ ಬಿಜೆಪಿಯ ಹಲವಾರು ಮುಖಂಡರು ಬೆಂಗಳೂರಿನಲ್ಲಿ ನಿನ್ನೆ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು. ಈ ಸಂದರ್ಭದಲ್ಲಿ ಕೃಷಿ ಖಾತೆ ಸಚಿವ ಎನ್.ಚಲುವರಾಯಸ್ವಾಮಿ, ಪಕ್ಷದ ಮುಖಂಡರಾದ ಸಲೀಂ ಅಹಮ್ಮದ್, ಬಿ.ಕೆ.ಹರಿಪ್ರಸಾದ್ ಸೇರಿದಂತೆ ಶಾಸಕರು ಹಾಗೂ ಮುಖಂಡರು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಜೆಡಿಎಸ್, ಬಿಜೆಪಿಯ ಹಲವು ಮುಖಂಡರ ಸೇರ್ಪಡೆಯಿಂದ ಪಕ್ಷದ ಬಲವರ್ಧನೆಗೆ ಸಹಕಾರಿಯಾಗಿದೆ. ಚುನಾವಣಾ ಸಂದರ್ಭದಲ್ಲಿ ಅವರ ಸೇವೆಯನ್ನು ಪಕ್ಷಕ್ಕೆ ಬಳಸಿಕೊಳ್ಳಲಾಗುವುದು ಎಂದು ತಿಳಿಸಿದರು.

*******

ಲೋಕಸಭಾ ಚುನಾವಣೆ ಹಿನ್ನೆಲೆ, ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ರಾಜ್ಯಾದ್ಯಂತ ವಿವಿಧ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುತ್ತಿದ್ದಾರೆ. ಲೋಕಸಭೆ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಸ್ಥಾಪಿಸಿರುವ ತೇಗೂರ ಚೆಕ್ ಪೋಸ್ಟ್‌ದಲ್ಲಿ ನಿಪ್ಪಾಣಿ ಗಂಗಾವತಿ ಬಸ್‌ನಲ್ಲಿ ಸರಿಯಾದ ದಾಖಲೆ ಇಲ್ಲದ 38 ಲಕ್ಷದ 50 ಸಾವಿರ ರೂಪಾಯಿ ಮೊತ್ತದ ಚಿನ್ನದ ಆಭರಣಗಳ್ಳು ವಶ ಪಡಿಸಿಕೊಂಡು ಎಫ್‌ಐಆರ್ ದಾಖಲಿಸಲಾಗಿದೆ ಎಂದು ಧಾರವಾಡ ಜಿಲ್ಲಾ ಚುನಾವಣಾಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಗದಗ ಜಿಲ್ಲೆಯ ನರಗುಂದ ವಿಧಾನಸಭಾ ಕ್ಷೇತ್ರದ ಮಾದರಿ ನೀತಿ ಸಂಹಿತೆಯ ನೋಡಲ್ ಅಧಿಕಾರಿ ಸೋಮಶೇಖರ್ ಬಿರಾದಾರ ತಾಲೂಕಿನ ಲೋಕಸಭಾ ಚುನಾವಣೆಗಳ ಮತಗಟ್ಟೆ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿದರು. ಮತಗಟ್ಟೆ ಕೇಂದ್ರಗಳಲ್ಲಿ ಮತದಾರರು ಯಾವುದೇ ಸಮಸ್ಯೆಗಳಿಲ್ಲದೆ ನಿರ್ಭೀತರಾಗಿ ತಮ್ಮ ಮತ ಚಲಾಯಿಸಲು ಸಕಲ ವ್ಯವಸ್ಥೆ ಕಲ್ಪಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಮಾದರಿ ನೀತಿ ಸಂಹಿತೆ ಜಾರಿಯಾದ 72 ಗಂಟೆ ಅವಧಿಯಲ್ಲಿ ಸರ್ಕಾರಿ, ಸಾರ್ವಜನಿಕ ಸ್ಥಳಗಳಲ್ಲಿ ಮತ್ತು ಖಾಸಗಿ ಒಡೆತನದಲ್ಲಿರುವ ಸ್ಥಳ, ಕಟ್ಟಡಗಳ ಮೇಲೆ ಪ್ರಕಟಿಸಲಾಗಿದ್ದ ವಿವಿಧ ರೀತಿಯ ಪ್ರಚಾರ ಹಾಗೂ ಮತದಾರರ ಮೇಲೆ ಪ್ರಭಾವ ಬೀರುವಂತಹ ಸುಮಾರು 1 ಸಾವಿರದ 272 ಪ್ರಚಾರ ಸಾಮಗ್ರಿಗಳನ್ನು ತೆರವುಗೊಳಿಸಲಾಗಿದೆ ಎಂದು ಉತ್ತರಕನ್ನಡ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ತಿಳಿಸಿದ್ದಾರೆ. ಕಡಿಮೆ ಪ್ರಮಾಣದ ಮತದಾನ ಇರುವೆಡೆ, ಜಿಲ್ಲೆಯ ಗ್ರಾಮ ಪಂಚಾಯಿತಿ ಹಾಗೂ ಲೋಕಸಭಾ ಚುನಾವಣೆಗಾಗಿ ನಿಯೋಜಿಸಿದ ಎಲ್ಲಾ ನೋಡಲ್ ಅಧಿಕಾರಿಗಳು ಯಾವುದೇ ಲೋಪವಾಗದಂತೆ ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವಂತೆ ಯಾದಗಿರಿ ಜಿಲ್ಲಾಧಿಕಾರಿ ಡಾಕ್ಟರ್ ಬಿ.ಸುಶೀಲಾ ಸೂಚಿಸಿದ್ದಾರೆ. ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲೂಕಿನ ಕಾನ ಹೊಸಹಳ್ಳಿ ಸಮೀಪದ ಆಲೂರ್ ಚೆಕ್ ಪೋಸ್ಟ್ ನಲ್ಲಿ ವಾಹನ ಪರಿಶೀಲನೆಯ ಸಂದರ್ಭದಲ್ಲಿ ಮೂರು ಪ್ರತ್ಯೇಕ ವಾಹನಗಳಿಂದ ದಾಖಲೆ ರಹಿತ ಒಟ್ಟು 12 ಲಕ್ಷದ 51 ಸಾವಿರ ರೂಪಾಯಿ ನಗದು ವಶಪಡಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ. ಲೋಕಸಭಾ ಚುನಾವಣೆಯನ್ನು ಶಾಂತಿಯುತ, ಪಾರದರ್ಶಕ, ನಿಷ್ಪಕ್ಷಪಾತವಾಗಿ ನಡೆಸಲು ದಾವಣಗೆರೆ ಜಿಲ್ಲೆಯಲ್ಲಿ ಅಕ್ರಮ ಕಳ್ಳಭಟ್ಟಿ ತಯಾರಿಕೆ, ನಕಲಿ ಮದ್ಯ, ಸರಾಯಿ, ಅಕ್ರಮ ಮದ್ಯ ಹಂಚಿಕೆ, ಮಾದಕ ವಸ್ತುಗಳ ಸರಬರಾಜು ತಡೆಗಟ್ಟಲು ಅಬಕಾರಿ ಇಲಾಖೆ ಅಧಿಕಾರಿಗಳ ತಂಡ ರಚಿಸಲಾಗಿದೆ. ಅಕ್ರಮಗಳು ಕಂಡುಬಂದಲ್ಲಿ ಸಾರ್ವಜನಿಕರು ಟೋಲ್ ಫ್ರೀ ಸಂಖ್ಯೆ 1800 4250-379 ಕ್ಕೆ ಕರೆ ಮಾಡಬಹುದಾಗಿದೆ ಎಂದು ಜಿಲ್ಲಾಧಿಕಾರಿ ಡಾಕ್ಟರ್ ಎಂ.ವಿ.ವೆಂಕಟೇಶ್ ತಿಳಿಸಿದ್ದಾರೆ.

ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸಂಚಾರಿ ಜಾರಿ ದಳದಿಂದ ದಾಖಲೆ ಇಲ್ಲದ 2 ಲಕ್ಷದ 90 ಸಾವಿರ ರೂಪಾಯಿ ಜಪ್ತಿ ಮಾಡಲಾಗಿದೆ. ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಬಕಾರಿ ಇಲಾಖೆಯಿಂದ ಸುಮಾರು 49 ಲೀಟರ್ ಮದ್ಯ ವಶಪಡಿಸಿಕೊಳ್ಳಲಾಗಿದೆ ಎಂದು ಸಹಾಯಕ ಚುನಾವಣಾಧಿಕಾರಿ ಬಸವನಗೌಡ ಕೋಟೂರ ತಿಳಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಚುನಾವಣಾ ಅಕ್ರಮಗಳನ್ನು ತಡೆಯಲು ಜಿಲ್ಲಾಡಳಿತ ಹಲವು ಕ್ರಮಗಳನ್ನು ಕೈಗೊಂಡಿದೆ. ಜಿಲ್ಲೆಯ ಕೊಪ್ಪ ತಾಲೂಕಿನ ಕೊಗ್ರೆ ಗ್ರಾಮದಲ್ಲಿ ಅಕ್ರಮವಾಗಿ ಶೇಖರಿಸಿದ್ದ ಮದ್ಯವನ್ನು ಅಧಿಕಾರಿಗಳು ದಾಳಿ ನಡೆಸಿ ವಶಪಡಿಸಿಕೊಂಡಿದ್ದಾರೆ.ರಾಯಚೂರಿನ ಗಡಿ ಚೆಕ್‌ಪೋಸ್ಟ ಆಗಿರುವ ಸಿಂಗನೋಡಿಯಲ್ಲಿ ವಾಹನಗಳ ತಪಾಸಣೆ ಮಾಡುವಾಗ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 4 ಲಕ್ಷ ರೂಪಾಯಿ ಹಣವನ್ನು ವಾಹನ ಸಮೇತ ಚುನಾವಣೆ ತನಿಖಾ ತಂಡ  ವಶ ಪಡಿಸಿಕೊಂಡಿದೆ.

*******

ಲೋಕಸಭಾ ಚುನಾವಣೆ ಹಿನ್ನೆಲೆ ರಾಜ್ಯದ ವಿವಿಧೆಡೆ, ಮತದಾನದ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಹೋಬಳಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಉದ್ದೇಶಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಗರಿಮಾ ಪನ್ವಾರ್ ತಿಳಿಸಿದ್ದಾರೆ.ಕಲಬುರಗಿ ಜಿಲ್ಲಾಡಳಿತ ಮತ್ತು ಜಿಲ್ಲಾ ಸ್ವೀಪ್ ಸಮಿತಿಯಿಂದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶಾಲಾ-ಕಾಲೇಜುಗಳಲ್ಲಿನ ಮತದಾರರ ಸಾಕ್ಷರತಾ ಕ್ಲಬ್‌ಗಳ ತರಬೇತಿದಾರರು ಮತ್ತು ಕ್ಲಬ್ ಸಂಯೋಜಕರಾಗಿರುವ ಶಿಕ್ಷಕರು, ಉಪನ್ಯಾಸಕರಿಗೆ ಆಯೋಜಿಸಲಾದ ಮತದಾರರ ಜಾಗೃತಿ ತರಬೇತಿ ಕಾರ್ಯಕ್ರಮವನ್ನು ಜಿಲ್ಲಾ ಚುನಾವಣಾಧಿಕಾರಿ ಬಿ.ಫೌಜಿಯಾ ತರನ್ನುಮ್ ಉದ್ಘಾಟಿಸಿದರು.

ಎಪ್ರಿಲ್ 26 ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ಪ್ರತಿಯೊಬ್ಬ ಅರ್ಹ ಮತದಾರರು ತಮ್ಮ ಮತವನ್ನು ಚಲಾಯಿಸುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸಬೇಕು ಎಂದು ದಕ್ಷಿಣ ಕನ್ನಡ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಕರೆ ನೀಡಿದ್ದಾರೆ. ಕೋಲಾರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಚಿಂತಾಮಣಿ ನಗರದಲ್ಲಿ ನಿನ್ನೆ ಆರೋಗ್ಯ ಇಲಾಖೆ ನೇತೃತ್ವದಲ್ಲಿ ಆಶಾ ಮತ್ತು ಆರೋಗ್ಯ ಕಾರ್ಯಕರ್ತರು ಮಾನವ ಸರಪಳಿ ನಿರ್ಮಿಸುವ ಮೂಲಕ ಮತದಾನದ ಕುರಿತು ಜಾಗೃತಿ ಮೂಡಿಸಿದರು. ಕೋಲಾರ ಜಿಲ್ಲೆಯ ಕೆಲವು ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಪ್ರದೇಶಗಳಲ್ಲಿ ಕೋಲಾರ ಜಿಲ್ಲಾಡಳಿತ, ಪೊಲೀಸ್ ಇಲಾಖೆ, ಹಾಗೂ ಮಿಲಿಟರಿ ಪಡೆಗಳು ಪಥ ಸಂಚಲನ ನಡೆಸಿದವು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

ಉಜನಿ ಜಲಾಶಯದಿಂದ ಭೀಮಾ ನದಿಗೆ ಹಾಗೂ ಕೊಯ್ನಾ ಜಲಾಶಯದಿಂದ ಕೃಷ್ಣಾ ನದಿಗೆ ನೀರು ಹರಿಸಲು ಮಹಾರಾಷ್ಟ್ರ ಮುಖ್ಯಮಂತ್ರಿ ಏಕ್‌ನಾಥ್ ಶಿಂಧೆ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ. ತೀವ್ರ ಬರ ಎದುರಿಸುತ್ತಿರುವ ಕಲಬುರಗಿ ಜಿಲ್ಲೆ ಸೇರಿದಂತೆ, ಉತ್ತರ ಕರ್ನಾಟಕದ ಬೆಳಗಾವಿ, ವಿಜಯಪುರ, ಬಾಗಲಕೋಟೆ, ಯಾದಗಿರಿ ಹಾಗೂ ರಾಯಚೂರು ಜಿಲ್ಲೆಗಳಿಗೆ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಕೊಯ್ನಾ ಜಲಾಶಯದಿಂದ ಕೃಷ್ಣಾ ನದಿಗೆ ಹಾಗೂ ಉಜನಿ ಜಲಾಶಯದಿಂದ ಭೀಮಾ ನದಿಗೆ ನೀರು ಹರಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಹಾರಾಷ್ಟ್ರ ಮುಖ್ಯಮಂತ್ರಿಗೆ ಪತ್ರ ಬರೆದಿದ್ದು, ಆದಷ್ಟು ಬೇಗ ಸಮಸ್ಯೆ ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್‌ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಮಳೆಯ ಅಭಾವದಿಂದಾಗಿ ಜಲಾಶಯಗಳಲ್ಲಿ ನೀರಿನ ಸಂಗ್ರಹ ಕಡಿಮೆಯಾಗಿದ್ದು, ಈಗಿರುವ ಪ್ರಮಾಣದಿಂದ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸಲು ಆಗುವುದಿಲ್ಲ. ಹಾಗಾಗಿ, ಕೊಯ್ನಾ ಜಲಾಶಯದಿಂದ ಕೃಷ್ಣಾ ನದಿಗೆ 2 ಟಿಎಂಸಿ ಮತ್ತು ಉಜನಿ ಜಲಾಶಯದಿಂದ ಭೀಮಾ ನದಿಗೆ 1 ಟಿಎಂಸಿ ನೀರು ಹರಿಸುವಂತೆ ಮುಖ್ಯಮಂತ್ರಿ ಇದೇ 7 ರಂದು ಬರೆದ ಪತ್ರದಲ್ಲಿ ತಿಳಿಸಿದ್ದಾರೆ ಎಂದರು. ಮುಖ್ಯಮಂತ್ರಿ ಅವರು ಬರೆದ ಪತ್ರಕ್ಕೆ ಸ್ಪಂದನೆ ಸಿಗದಿರುವ ಹಿನ್ನೆಲೆಯಲ್ಲಿ, ಅಧಿಕಾರಿಗಳೊಂದಿಗೆ ಚರ್ಚಿಸಿ, ಮಹಾರಾಷ್ಟ್ರದ ಅಧಿಕಾರಿಗಳ ಮೇಲೆ ನಿರಂತರ ಒತ್ತಡ ತರಲಾಗುತ್ತಿದೆ. ಕಲಬುರಗಿ ಜಿಲ್ಲೆ ಹಾಗೂ ಈಗ ತೀವ್ರ ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಅಫ್ಜಲ್‌ಪುರ ತಾಲೂಕಿನ ಸಮಸ್ಯೆ ಬಗೆಹರಿಸಲು ಭೀಮಾ ನದಿಗೆ ನೀರು ಹರಿಸಲು ಪ್ರಯತ್ನ ನಡೆದಿದೆ. ಈ ನಡುವೆ, ಆಲಮಟ್ಟಿ ಹಾಗೂ ನಾರಾಯಣಪುರ ಜಲಾಶಯದಿಂದ ಸೊನ್ನಾ ಬ್ಯಾರೇಜ್‌ಗೆ ನೀರು ತರುವ ಪ್ರಯತ್ನ ಕೂಡ ನಡೆದಿದೆ. ಈ ನಿಟ್ಟಿನಲ್ಲಿ ಕಲಬುರಗಿ ಮತ್ತು ಬೆಳಗಾವಿಯ ಪ್ರಾದೇಶಿಕ ಆಯುಕ್ತರಿಗೆ ಪತ್ರ ಬರೆದಿದ್ದಾರೆ ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದರು.

*******

2022–23ನೇ ಸಾಲಿನ ಮಿಕ್ಕುಳಿದ ವೃಂದದ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಮಾರ್ಚ 18 ರಿಂದ 3 ದಿನಗಳ ಕಾಲ ದೈಹಿಕ ಸಾಮರ್ಥ್ಯ ಮತ್ತು ಸಹಿಷ್ಣುತೆ ಪರೀಕ್ಷೆಗಳನ್ನು ನಿಗದಿಪಡಿಸಲಾಗಿತ್ತು. ತಾಂತ್ರಿಕ ಕಾರಣಗಳಿಂದಾಗಿ ಈ ದಿನಗಳಂದು ನಡೆಯಬೇಕಾಗಿದ್ದ ಪರೀಕ್ಷೆಗಳನ್ನು ಮುಂದೂಡಲಾಗಿದೆ. ಆದರೆ, ಈ ಪರೀಕ್ಷೆಗಳನ್ನು ಮಾರ್ಚ 25 ರಿಂದ 3 ದಿನಗಳ ಕಾಲ ನಡೆಸಲು ನಿಗದಿಪಡಿಸಿರುವುದಾಗಿ ನಕಲಿ ದಾಖಲಾತಿ ಸೃಷ್ಟಿಸಿ ಸಾಮಾಜಿಕ ಜಾಲತಾಣದಲ್ಲಿ ಹರಡಿ, ಅಭ್ಯರ್ಥಿಗಳಿಗೆ, ಘಟಕಾಧಿಕಾರಿಗಳಿಗೆ ದಾರಿ ತಪ್ಪಿಸುವ ಪ್ರಯತ್ನ ಪಟ್ಟಿರುವುದು ಕಂಡುಬಂದಿರುತ್ತದೆ.

ಆದರೆ ಈ ರೀತಿ ಬದಲಿ ದಿನಾಂಕಗಳನ್ನು ನಿಗದಿಪಡಿಸಿರುವುದಿಲ್ಲ.ಆದ್ದರಿಂದ, ಈ ಸಂಬಂಧ ತಪ್ಪು ಮಾಹಿತಿ ನೀಡಿರುವವರ ವಿರುದ್ಧ ತನಿಖೆ ನಡೆಸಲು ಪ್ರಕರಣವನ್ನು ದಾಖಲಿಸಲಾಗಿದೆ. ಅಭ್ಯರ್ಥಿಗಳು ನೇಮಕಾತಿಗೆ ಸಂಬಂಧಿಸಿದ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 080–2294–3346 ಮತ್ತು 080–2294–3039 ಕ್ಕೆ ಸಂಪರ್ಕಿಸಲು ಕೋರಲಾಗಿದೆ.

*******

ಈಗ ಸಂಕ್ಷಿಪ್ತ ಸುದ್ದಿಗಳು

ನೀರಿನ ಮೂಲಗಳನ್ನು ರಕ್ಷಿಸುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ ಎಂದು ದಾವಣಗೆರೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ ಹೆಗಡೆ ಹೇಳಿದ್ದಾರೆ. ದಾವಣಗೆರೆ ಜಿಲ್ಲಾ ನ್ಯಾಯಾಲಯದಲ್ಲಿ ವಿಶ್ವ ಜಲ ದಿದ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

*******

ನೀರು ಒಂದು ಸಂಪನ್ಮೂಲ ಮಾತ್ರವಲ್ಲ ಅದು ಇಡೀ ಜೀವಸಂಕುಲದ ಜೀವಾಮೃತ ಎಂದು ಚಿತ್ರದುರ್ಗ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗೀತಾ ಕೆ.ಬಿ. ಹೇಳಿದ್ದಾರೆ.

*******

ಜಾನುವಾರುಗಳಲ್ಲಿ ಕಂಡುಬರುವ ಕಾಲುಬಾಯಿ ರೋಗ ನಿಯಂತ್ರಣಕ್ಕೆ ರಾಷ್ಟ್ರೀಯ ಜಾನುವಾರು ರೋಗಗಳ ನಿಯಂತ್ರಣ ಕಾರ್ಯಕ್ರಮದಡಿ ಐದನೇ ಸುತ್ತಿನ ಕಾಲುಬಾಯಿ ಲಸಿಕಾ ಕಾರ್ಯಕ್ರಮವನ್ನು ಉಡುಪಿ ಜಿಲ್ಲೆಯಾದ್ಯಂತ ಏಪ್ರಿಲ್ 1 ರಿಂದ 30 ರ ವರೆಗೆ ಹಮ್ಮಿಕೊಳ್ಳಲಾಗುತ್ತಿದ್ದು, ರೈತರು ಇದರ ಪ್ರಯೋಜನ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿ ಡಾಕ್ಟರ್ ಕೆ ವಿದ್ಯಾಕುಮಾರಿ ತಿಳಿಸಿದ್ದಾರೆ.

*******

ಗದಗ ಜಿಲ್ಲೆಯ ನಾಗಾವಿ ಗ್ರಾಮದಲ್ಲಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ 'ಹಿರಿಯರ ಸಮಸ್ಯೆಗಳು ಮತ್ತು ಪರಿಹಾರಗಳು' ಕುರಿತಾದ ರಾಜ್ಯಮಟ್ಟದ ವಿಚಾರ ಸಂಕಿರಣ ನಿನ್ನೆ ಜರುಗಿತು.

*******